93

## ಕರ್ನಾಟಕ ವಿಧಾನ ಪರಿಷತ್ತು

### ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರ ನಿಯಮ-72ರ ಮೇರೆಗೆ ಸೂಚನೆ.

ಪ್ರಶ್ನೆ:-

ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ವರದಿಯನ್ವಯ ಕೋಟ್ಯಾಂತರ ರೂಪಾಯಿ ಮೊತ್ತದ ಅಲ್ಪಸಂಖ್ಯಾತರ ಆಸ್ತಿ ಕಬಳಿಕೆ ಆರೋಪ ಕೇಳಿ ಬಂದಿರುವುದರಿಂದ, ಸದರಿ ವರದಿಯನ್ನು ಸದನದಲ್ಲಿ ಮಂಡಿಸುವ ಮತ್ತು ಅಲ್ಪಸಂಖ್ಯಾತ ಮುಸಲ್ಮಾನರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:-

ಶ್ರೀ ಅನ್ವರ್ ಮಾಣಿಪ್ಪಾಡಿ, ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರು ದಿನಾಂಕ: 26-03-2012 ರಂದು ಸರ್ಕಾರಕ್ಕೆ ಸಲ್ಲಿಸಿದ ವಿಶೇಷ ವರದಿಯ ಶಿಫಾರಸ್ಸುಗಳನ್ನು ಸಚಿವ ಸಂಪುಟದ ನಿರ್ಣಯದನ್ವಯ ವರದಿಯನ್ನು ಸರ್ಕಾರದ ಆದೇಶ ಸಂಖ್ಯೆ: MWD 19 WES 2015, ದಿನಾಂಕ: 28-03-2016ರನ್ವಯ ತಿರಸ್ಕರಿಸಿ, ಅದರನ್ವಯ ಎಲ್ಲಾ ಆದೇಶಗಳನ್ನು ಅನೂರ್ಜಿತಗೊಳಿಸಲಾಯಿತು.

ತದನಂತರ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾಗಿದ್ದ ಶ್ರೀ ಅನ್ವರ್ ಮಾಣಿಪ್ಪಾಡಿರವರು 2012 ರಲ್ಲಿ ಸರ್ಕಾರಕ್ಕೆ ಸಲ್ಲಿಸಿದ ವಿಶೇಷ ವರದಿಯನ್ನು 15ನೇ ವಿಧಾನಸಭೆಯ ಏಳನೇ ಅಧಿವೇಶನದಲ್ಲಿ ದಿನಾಂಕ: 23-09-2020 ರಂದು ಹಾಗೂ ವಿಧಾನ ಪರಿಷತ್ತಿನ 141ನೇ ಅಧಿವೇಶನದಲ್ಲಿ ದಿನಾಂಕ: 25-09-2020ರಂದು ಮಾನ್ಯ ಉಪ ಮುಖ್ಯಮಂತ್ರಿಗಳು ಸದನದಲ್ಲಿ ಮಂಡಿಸಲಾಗಿದ್ದು, ಸದರಿ ಮಾಹಿತಿಗಳನ್ನು ಪುಟ 5 ರಿಂದ 13 ರವರೆಗೆ ನೀಡಲಾಗಿದೆ. ಸದರಿ ವರದಿಯ ಬಗ್ಗೆ ವಿಧಾನ ಸಭೆ ಹಾಗೂ ವಿಧಾನ ಪರಿಷತ್ತಿನಲ್ಲಿ ಯಾವುದೇ ಚರ್ಚೆ ನಡೆದಿರುವುದಿಲ್ಲ ಹಾಗೂ ನಿರ್ಣಯವನ್ನು ತೆಗೆದುಕೊಂಡಿರುವುದಿಲ್ಲ.

ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಅನುಸಾರ "ಒಮ್ಮೆ ವಕ್ಫ್ ಎಂದು ಜಮೀನು ದಾಖಲೆಯಾಗಿದ್ದಲ್ಲಿ ಅದು ಖಾಯಂ ಆಗಿ ವಕ್ಫ್ ಆಸ್ತಿ ಆಗಿರುತ್ತದೆ". ಆದ್ದರಿಂದ, ವಕ್ಫ್ ಆಸ್ತಿಗಳ ಸಂರಕ್ಷಣೆಗಾಗಿ ವಕ್ಫ್ ಕಾಯಿದೆ 1995 (ತಿದ್ದುಪಡಿ 2013)ರ ಕಲಂ 52 ಮತ್ತು ಕಲಂ 54 ಹಾಗೂ ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಆದಿಭೋಗದಾರರನ್ನು ಹೊರಹಾಕುವ) ಕಾಯಿದೆ-1974 ರಡಿಯಲ್ಲಿ ಅನಧಿಕೃತ ಒತ್ತುವರಿಯಿಂದ ಸಂರಕ್ಷಿಸಲಾಗುತ್ತಿದೆ. ಹಾಗೂ ವಿವಿಧ ನ್ಯಾಯಾಲಯಗಳಲ್ಲಿ ಪ್ರಕರಣಗಳನ್ನು ದಾಖಲು ಮಾಡಲಾಗಿರುತ್ತದೆ. ಹಾಗೂ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 2ನೇ ಸರ್ವೆ ಕಾರ್ಯವು ಪೂರ್ಣಗೊಂಡಿದ್ದು, ರಾಜ್ಯಪತ್ರದಲ್ಲಿ ಅಧಿಸೂಚಿಸುವ ಕಾರ್ಯ ಪ್ರಗತಿಯಲ್ಲಿದ್ದು, ಖಾತಾ ಬದಲಾವಣೆಗೆ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಎಂಡಬ್ಲ್ಯೂಡಿ 255 ಎಲ್ಎಂಕ್ಯೂ 2021

(ಶಶಿಕಲಾ ಅ.ಜೊಲ್ಲೆ)
ಮಾನ್ಯ ಮುಜರಾಯಿ, ಹಜ್
ಮತ್ತು ವಕ್ಫ್ ಸಚಿವರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರ ವಿಶೇಷ ವರದಿಯ ಕುರಿತು.

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಕಾಇ 54 ಭಾಮಮ 2007, ದಿನಾಂಕ: 25.02.2009.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಅಸಂಕಇ 35 ಭಾಮಮ 2010, ದಿನಾಂಕ: 25.11.2010.
3. ದಿನಾಂಕ: 26.03.2012ರಂದು ಕರ್ನಾಟಕ ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರು ಸಲ್ಲಿಸಿರುವ ವಿಶೇಷ ವರದಿ.
4. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 99 ಡಬ್ಲೂಇಎಸ್ 2012, ದಿನಾಂಕ:04.07.2012

**ಪ್ರಸ್ತಾವನೆ:**

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಕಾಯಿದೆ ಸೆಕ್ಷನ್ 3(2) (ಎ) ರನ್ವಯ, ಮೇಲೆ (1)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯನ್ವಯ ಆಯೋಗವನ್ನು ರಚಿಸಲಾಗಿದೆ.

ಶ್ರೀ ಅನ್ವರ್ ಮಾನಪ್ಪಾಡಿ, ಇವರನ್ನು ಮೇಲೆ(2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆ ರನ್ವಯ ಶ್ರೀ ಖುಸ್ರೋ ಖುರೇಶಿ ಇವರ ಜಾಗದಲ್ಲಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರನ್ನಾಗಿ ನೇಮಿಸಿ ಅಧಿಸೂಚಿಸಲಾಗಿದೆ.

ಸೆಕ್ಷನ್ 4(1) ರನ್ವಯ ಆಯೋಗದ ಸದಸ್ಯರುಗಳ ಅಧಿಕಾರಾವಧಿಯು ದಿನಾಂಕ 24-2-2012ಕ್ಕೆ ಮುಕ್ತಾಯಗೊಂಡಿರುತ್ತದೆ. ದಿ.24-2-2012ಕ್ಕೆ ಸದಸ್ಯರುಗಳ ಅವಧಿಯು ಮುಕ್ತಾಯಗೊಂಡಿದ್ದರಿಂದ, ಆಯೋಗದ ಕಾಯಿದೆ ಸೆಕ್ಷನ್ 2 (3) ಮತ್ತು 3(2)(ಎ) ರನ್ವಯ ಆಯೋಗವು ಅಸ್ತಿತ್ವದಲ್ಲಿ ಇಲ್ಲದಿದ್ದರೂ, ಹಿಂದಿನ ಅಧ್ಯಕ್ಷರಾಗಿದ್ದ ಶ್ರೀ ಅನ್ವರ್ ಮಾನಪ್ಪಾಡಿರವರು ಸದಸ್ಯರುಗಳ ಅಧಿಕಾರಾವಧಿಯು ದಿ.24-2-2012ರಂದು ಮುಕ್ತಾಯಗೊಂಡ ನಂತರವೂ ಮೇಲೆ (3)ರಲ್ಲಿ ಓದಲಾದ ದಿನಾಂಕದೊಂದು ವಿಶೇಷ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ (4)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕರ್ನಾಟಕ ಲೋಕಾಯುಕ್ತ ನಿಯಮ 1984ರ ನಿಯಮ 7(2)(ಎ) ಅಡಿಯಲ್ಲಿ ಸದರಿ ವಿಶೇಷ ವರದಿಯ ಬಗ್ಗೆ ತನಿಖೆಯನ್ನು ಕೈಗೊಳ್ಳಲು ಕರ್ನಾಟಕ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಕರ್ನಾಟಕ ಅಲ್ಪಸಂಖ್ಯಾತರ ಆಯೋಗದ ಕಾಯ್ದೆ 1994ರ ಕಲಂ 10(2)ರಡಿಯಲ್ಲಿ ಆಯೋಗದ ಶಿಫಾರಸ್ಸುಗಳನ್ನು ಹಾಗೂ ಸರ್ಕಾರವು ಅದರ ಮೇಲೆ ತೆಗೆದುಕೊಂಡಿರುವ ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಸೂಚಿಸುವ ಮೆಮೋರ್‍ಯಾಂಡಂನೊಂದಿಗೆ ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, ಭಾಗ-1 ರಲ್ಲಿನ ಐಟಂ 28 ರ ಪ್ರಕಾರ ಕರ್ನಾಟಕ ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರು ಸರ್ಕಾರಕ್ಕೆ ಸಲ್ಲಿಸಿರುವ ವಿಶೇಷ ವರದಿಯ ಶಿಫಾರಸ್ಸುಗಳನ್ನು ಸಚಿವ ಸಂಪುಟದ ನಿರ್ಣಯಕ್ಕಾಗಿ ಮಂಡಿಸಲಾಯಿತು.

ಕರ್ನಾಟಕ ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರು ಸರ್ಕಾರಕ್ಕೆ ಸಲ್ಲಿಸಿರುವ ವಿಶೇಷ ವರದಿಯ ಶಿಫಾರಸ್ಸುಗಳನ್ನು ದಿನಾಂಕ: 03.03.2016ರಂದು ನಡೆದ ಸಚಿವ ಸಂಪುಟವು ತಿರಸ್ಕರಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

<u>ಸರ್ಕಾರಿ ಆದೇಶ ಸಂಖ್ಯೆ: MWD 19 WES 2015, ಬೆಂಗಳೂರು,ದಿನಾಂಕ: 28.03.2016</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ: 26.03.2012ರಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಹಿಂದಿನ ಅಧ್ಯಕ್ಷರು ಸರ್ಕಾರಕ್ಕೆ ಸಲ್ಲಿಸಿದ ವಿಶೇಷ ವರದಿಯ ಶಿಫಾರಸ್ಸುಗಳನ್ನು ಸರ್ಕಾರವು ತಿರಸ್ಕರಿಸಿ ಆದೇಶಿಸಿದೆ.

ಈ ವಿಶೇಷ ವರದಿಗೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರದಿಂದ ಹೊರಡಿಸಲಾಗಿರುವ ಎಲ್ಲಾ ಆದೇಶಗಳು ಅನೂರ್ಜಿತಗೊಳ್ಳುತ್ತವೆ.

ಈ ಆದೇಶವನ್ನು ದಿನಾಂಕ: 03.03.2016ರ ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ-122/2015ರ ನಿರ್ಣಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಕ್ತರಭಾಷಾ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಅಲ್ಪಸಂಖ್ಯಾತರ ಕಲ್ಯಾಣ,ಹಜ್
ಮತ್ತು ವಕ್ಫ್ ಇಲಾಖೆ.

ಗೆ:

1) ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಮಾನ್ಯ ಕರ್ನಾಟಕ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6) ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
7) ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
8) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9) ಸರ್ಕಾರದ ಜಂಟಿ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

TAS

# ಕರ್ನಾಟಕ ವಿಧಾನಸಭೆ
# KARNATAKA LEGISLATIVE ASSEMBLY

ವಿಧಾನಸಭೆಯ ಸಚಿವಾಲಯ,
ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ,
ಬೆಂಗಳೂರು-560 233.

ಸಂಖ್ಯೆ:ವಿಸಸ/ಶಾರಶಾ/60/ವಿವ/2021 ದಿನಾಂಕ:08.07.2021

ಕಾರ್ಯದರ್ಶಿಯವರಿಂದ,
ಕರ್ನಾಟಕ ವಿಧಾನಸಭೆ.

ರವರಿಗೆ:
ಸರ್ಕಾರದ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ಸದನದಲ್ಲಿ ಮಂಡಿಸಿರುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ:MWD/17/WLM/2015, ದಿನಾಂಕ: 02.07.2021. — 787

********

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು 15ನೇ ವಿಧಾನಸಭೆಯ ಏಳನೇ ಅಧಿವೇಶನದಲ್ಲಿ ದಿನಾಂಕ:23.09.2020ರಂದು ಸದನದಲ್ಲಿ ಮಂಡಿಸಲಾಗಿರುತ್ತದೆ. ಯಾವುದೇ ಆಯೋಗದ ವರದಿಯನ್ನು ಸದನದಲ್ಲಿ ಮಂಡಿಸಿದ ನಂತರ ಸಂಬಂಧಪಟ್ಟ ಇಲಾಖೆಯ ವತಿಯಿಂದ ಮುಂದಿನ ಕ್ರಮವನ್ನು ಕೈಗೊಳ್ಳಲಾಗುತ್ತದೆ. ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯ ಮಂಡನೆಗೆ ಸಂಬಂಧಿಸಿದ ನಡವಳಿಯ ಪ್ರತಿಗಳನ್ನು ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,

(ಹೆಚ್.ಎಸ್.ಕಸ್ತೂರಿ)
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ ಸಚಿವಾಲಯ.

PS/Secy./MWD No. 5046 Date: 9-7-21

(12) (~~145~~)

# ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂ: 5079, ವಿಧಾನಸೌಧ,
ಬೆಂಗಳೂರು-560 001 ದಿನಾಂಕ:14.07.2021.

ಸಂಖ್ಯೆ: ಕವಿಪ/ಶಾರಶಾ/47/ಇತರೆ/2020

ಕಾರ್ಯದರ್ಶಿಯವರಿಂದ,
ಕರ್ನಾಟಕ ವಿಧಾನ ಪರಿಷತ್ತು.

ರವರಿಗೆ,
ಸರ್ಕಾರದ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

PRS/Secy./MWD No. 5069
Date: 14-7-21

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯ ಕುರಿತು ಕೈಗೊಂಡ ಕ್ರಮದ ಬಗ್ಗೆ ಮಾಹಿತಿ ಕೋರಿರುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂ.MWD/17/WLM/2015
ದಿನಾಂಕ:02.07.2021

* * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಿತ ಪತ್ರದತ್ತ ಗಮನ ಸೆಳೆಯುತ್ತಾ ತಿಳಿಸಬಯಸುವುದೇನೆಂದರೆ ವಿಧಾನ ಪರಿಷತ್ತಿನ 141ನೇ ಅಧಿವೇಶನದಲ್ಲಿ ದಿನಾಂಕ:25.09.2020ರಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ಮಾನ್ಯ ಉಪ ಮುಖ್ಯಮಂತ್ರಿಯವರು ಸದನದಲ್ಲಿ ಮಂಡಿಸಿರುತ್ತಾರೆ. ತರುವಾಯ ವರದಿಯ ಮೇಲೆ ಯಾವುದೇ ಚರ್ಚೆ ನಡೆದಿರುವುದಿಲ್ಲ ಹಾಗೂ ನಿರ್ಣಯವನ್ನು ತೆಗೆದುಕೊಂಡಿರುವುದಿಲ್ಲವೆಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ. **(ದಿನಾಂಕ:25.09.2020ರ ಸದನದ ನಡವಳಿಯ ಉದ್ಧೃತ ಭಾಗದ ಪ್ರತಿಯನ್ನು ಅವಗಾಹನೆಗೆ ಲಗತ್ತಿಸಿದೆ)**

ತಮ್ಮ ವಿಶ್ವಾಸಿ,

(ಕೆ. ಬಸವರಾಜು) 14/7/21
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.
080-22341308

14/7/2021

HA
14/7/21

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು.

3. ವರದಿಗಳನ್ನೊಪ್ಪಿಸುವುದು

ಡಾ||ವೈ.ಎ.ನಾರಾಯಣಸ್ವಾಮಿ (ಸದಸ್ಯರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ):- ಮಾನ್ಯ ಸಭಾಪತಿಯವರೇ, 15 ನೇ ವಿಧಾನಸಭೆಯ 2019-20ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಸದಸ್ಯನಾದ ನಾನು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆಯ ಬೆಂಗಳೂರು Turf Club ಕುರಿತಂತೆ ಕೈಗೊಂಡಿರುವ ಅನುಸರಣಾ ಕ್ರಮಕ್ಕೆ ಸಂಬಂಧಿಸಿದ ಸಮಿತಿಯ 4ನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ಸದಸ್ಯರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ):- ಮಾನ್ಯ ಸಭಾಪತಿಯವರೇ, ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರುಗಳ ಖಾಸಗಿ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಯ ಅಧ್ಯಕ್ಷರ ಪರವಾಗಿ ನಾನು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಯ ನಿಯಮ 215 ರ ಪ್ರಕಾರ, ಸಮಿತಿಯ ಮೊದಲನೆ ವರದಿಯನ್ನು ಸದನಕ್ಕೆ ಮಂಡಿಸುತ್ತಿದ್ದೇನೆ.

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಉಪ ಮುಖ್ಯ ಮಂತ್ರಿಗಳು):- ಮಾನ್ಯ ಸಭಾಪತಿಯವರೇ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:** ವರದಿಗಳನ್ನೊಪ್ಪಿಸಲಾಯಿತು.

ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

"ತಿದ್ದುಪಡಿಯಾಗದ ಪ್ರತಿ/unedited copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

# ಕರ್ನಾಟಕ ವಿಧಾನ ಪರಿಷತ್ತು

25ನೇ ಸೆಪ್ಟೆಂಬರ್ 2020
ಶುಕ್ರವಾರ

## ವಿಷಯಾನುಕ್ರಮಣಿಕೆ

1. ಸಂತಾಪ ಸೂಚನೆ

ಹಾಲಿ ವಿಧಾನಸಭಾ ಸದಸ್ಯರಾಗಿದ್ದ ಶ್ರೀ ಬಿ.ನಾರಾಯಣರಾವ್‌ರವರ ನಿಧನದ ಬಗ್ಗೆ.

- ಶ್ರೀ ಕೋಟ ಶ್ರೀನಿವಾಸ ಪೂಜಾರಿ(ಸಭಾನಾಯಕರು)
- ಶ್ರೀ ಎಸ್.ಆರ್.ಪಾಟೀಲ್(ವಿರೋಧಪಕ್ಷದ ನಾಯಕರು)
- ಶ್ರೀ ರಘುನಾಥರಾವ್ ಮಲ್ಕಾಪೂರೆ
- ಶ್ರೀ ಶಾಂತರಾಮ್ ಬುಡ್ನ ಸಿದ್ದಿ
- ಶ್ರೀ ಅರವಿಂದಕುಮಾರ್ ಅರಳಿ
- ಶ್ರೀ ಎನ್.ರವಿಕುಮಾರ್
- ಶ್ರೀ ಅಡಗೂರ್ ಹೆಚ್.ವಿಶ್ವನಾಥ್
- ಶ್ರೀ ಲಕ್ಷ್ಮಣ ಸಂಗಪ್ಪ ಸವದಿ(ಉಪಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು)
- ಶ್ರೀ ಸಿ.ಎಂ.ಇಬ್ರಾಹಿಂ
- ಡಾ|| ತೇಜಸ್ವಿನಿಗೌಡ
- ಶ್ರೀ ಸುನಿಲ್ ವಲ್ಯಾಪುರೆ
- ಶ್ರೀ ಎಂ.ನಾರಾಯಣಸ್ವಾಮಿ(ವಿರೋಧಪಕ್ಷದ ಮುಖ್ಯ ಸಚೇತಕರು)
- ಶ್ರೀ ಪ್ರಕಾಶ್ ಕೆ.ರಾಥೋಡ್
- ಶ್ರೀ ಅಲ್ಲಂ ವೀರಭದ್ರಪ್ಪ
- ಶ್ರೀ ಆರ್.ಬಿ.ತಿಮ್ಮಾಪೂರ್

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು
3. ವರದಿಗಳನ್ನೊಪ್ಪಿಸುವುದು
4. ಕಾರ್ಯದರ್ಶಿಯವರ ವರದಿ

5. ಶಾಸನ ರಚನೆ

ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ವಿಧೇಯಕ, 2020

- ಶ್ರೀ ಕೆ.ಸಿ.ನಾರಾಯಣಗೌಡ(ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು)
- ಶ್ರೀ ಕೆ.ಎ.ತಿಪ್ಪೇಸ್ವಾಮಿ
- ಶ್ರೀ ಯು.ಬಿ.ವೆಂಕಟೇಶ್
- ಶ್ರೀ ಕೋಟ ಶ್ರೀನಿವಾಸ ಪೂಜಾರಿ(ಸಭಾನಾಯಕರು)
- ಶ್ರೀ ಎಸ್.ಆರ್.ಪಾಟೀಲ್(ವಿರೋಧಪಕ್ಷದ ನಾಯಕರು)

ತಿದ್ದುಪಡಿಯಾಗದ ಪ್ರತಿ ... ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

"ತಿದ್ದುಪಡಿಯಾಗದ ಪ್ರತಿ/ **Unedited Copy,** ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

# ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

[illegible]ನೇ ಅಧಿವೇಶನ

ಬುಧವಾರ, ದಿನಾಂಕ 23ನೇ ಸೆಪ್ಟೆಂಬರ್ 2020

**ವಿಷಯಾನುಕ್ರಮಣಿಕೆ (INDEX)**

**1. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

1) ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 74ನೇ ಸಂವಿಧಾನ ತಿದ್ದುಪಡಿ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿ (2020ನೇ ವರ್ಷದ ವರದಿ ಸಂಖ್ಯೆ : 2) ಮಂಡನೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು)

2) ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿ ಮಂಡನೆ

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಉಪ ಮುಖ್ಯಮಂತ್ರಿಗಳು) (ಸಾರಿಗೆ)

**2. ವರದಿಯನ್ನೊಪ್ಪಿಸುವುದು**

2019-20ನೇ ಸಾಲಿನ ಕರ್ನಾಟಕ ವಿಧಾನಸಭೆಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ವಿಶೇಷ ವರದಿ

**3. ವಿತ್ತೀಯ ಕಾರ್ಯಕಲಾಪಗಳು**

**2020-21ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಬೇಡಿಕೆಗಳ ಮಂಡನೆ**

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು)

**4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆಗೆ ಸರ್ಕಾರದ ಉತ್ತರ.**

ವಿಷಯ : ರಾಜ್ಯವನ್ನು ಬಾಧಿಸುತ್ತಿರುವ ಕೊರೊನಾ ನಿರ್ವಹಣೆಯಲ್ಲಿ ಸರ್ಕಾರದ ವೈಫಲ್ಯ ಮತ್ತು ಆರೋಗ್ಯ ಸಂಬಂಧಿ ಸಾಮಗ್ರಿಗಳು ಹಾಗೂ ಔಷಧಿಗಳ ಖರೀದಿಯಲ್ಲಿ ನಡೆದಿದೆಯೆನ್ನಲಾದ ಅವ್ಯವಹಾರಗಳ ಬಗ್ಗೆ ಸರ್ಕಾರದ ಉತ್ತರ.

ಡಾ : ಕೆ.ಸುಧಾಕರ್ (ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು)
ಶ್ರೀ ಬಿ.ಎಸ್.ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)
ಶ್ರೀ ಸಿದ್ದರಾಮಯ್ಯ (ಮಾನ್ಯ ವಿರೋಧ ಪಕ್ಷದ ನಾಯಕರು)
ಶ್ರೀ ಬಂಡೆಪ್ಪ ಖಾಶೆಂಪೂರ್
ಶ್ರೀ ಈ.ತುಕಾರಾಂ
ಶ್ರೀ ಪ್ರಿಯಾಂಕ್ ಖರ್ಗೆ

"ತಿದ್ದುಪಡಿಯಾಗದ ಪ್ರತಿ ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

"ತಿದ್ದುಪಡಿಯಾಗದ ಪ್ರತಿ/ Unedited Copy, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು"

ಅಧ್ಯಕ್ಷರು: ಇಂದಿನ ಕಾರ್ಯಕಲಾಪವನ್ನು ಪ್ರಾರಂಭ ಮಾಡುತ್ತಿದ್ದೇನೆ. ದಯವಿಟ್ಟು ಕಾರ್ಯಕಲಾಪದ ಪಟ್ಟಿಯಲ್ಲಿರುವಂತಹ ಎಲ್ಲಾ ವಿಷಯಗಳು ಮಹತ್ವದ್ದಾಗಿರುವುದರಿಂದ ಸಮಯದ ಮಿತಿಯೊಳಗೆ ನಾವು ಮಾಡಬೇಕಾದಂತಹ ಅಗತ್ಯತೆ ಇದೆ. ದಯವಿಟ್ಟು ಆ ಸಮಯ ಮಿತಿಗೆ ಎಲ್ಲರೂ ಸಹಕರಿಸಬೇಕು.

ಮಾನ್ಯ ಬಂಡೆಪ್ಪ ಖಾಶೆಂಪೂರ್ ಅವರೆ ತಾವು ನೀಡಿರುವ ನಿಲುವಳಿ ಸೂಚನೆ ಬಂದಿದೆ. ನಾನು ಆನಂತರ ಮಾತನಾಡಲು ಸಮಯ ಕೊಡುತ್ತೇನೆ.

<u>**1.ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**</u>

**1. ವಿಷಯ : ಭಾರತ ಸಂವಿಧಾನದ 151(2)ನೇ ಅನುಚ್ಛೇದದನ್ವಯ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 74ನೇ ಸಂವಿಧಾನ ತಿದ್ದುಪಡಿ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿ (2020ನೇ ವರ್ಷದ ವರದಿ ಸಂಖ್ಯೆ:2)**

- - -

ಶ್ರೀ ಬಿ.ಎಸ್.ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 74ನೇ ಸಂವಿಧಾನ ತಿದ್ದುಪಡಿ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿಯನ್ನು (2020ನೇ ವರ್ಷದ ವರದಿ ಸಂಖ್ಯೆ:2) ಸಭೆ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು.

**2. ವಿಷಯ : ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿ**

- - -

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ (ಮಾನ್ಯ ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು:ಮಂಡಿಸಲಾಯಿತು.

ತಿದ್ದುಪಡಿಯಾಗದ ನ್ಯಾಯಾಲಯಗಳಲ್ಲಿ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

## 2.ವರದಿಯನ್ನೊಪ್ಪಿಸುವುದು

**ವಿಷಯ : ಕರ್ನಾಟಕ ವಿಧಾನಸಭೆಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ವಿಶೇಷ ವರದಿ.**

---

ಅಧ್ಯಕ್ಷರು: 2019-20ನೇ ಸಾಲಿನ ಕರ್ನಾಟಕ ವಿಧಾನಸಭೆಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ವಿಶೇಷ ವರದಿಯನ್ನು ಮಂಡಿಸುತ್ತಿದ್ದೇನೆ.

## 3.ವಿತ್ತೀಯ ಕಾರ್ಯಕಲಾಪಗಳು

ಅಧ್ಯಕ್ಷರು: ಮಾನ್ಯ ಮುಖ್ಯಮಂತ್ರಿಯವರು 2020-21ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತು) ಬೇಡಿಕೆಗಳ ಪ್ರಸ್ತಾವವನ್ನು ಮಂಡಿಸುವುದು.

## 2019-20ನೇ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಬೇಡಿಕೆಗಳ ಮಂಡನೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ, 2021ನೇ ಮಾರ್ಚ್ 31 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 8, 10 ರಿಂದ 14, 16 ರಿಂದ 19, 21 ರಿಂದ 23 ಮತ್ತು 25 ರಿಂದ 28 ಕ್ಕೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚಗಳನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಮತ್ತು ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನು ಸೇರಿ, ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಈ ಸಭೆಯು ಮಂಜೂರು ಮಾಡಬೇಕೆಂಬ ಪೂರಕ ಅಂದಾಜುಗಳ (ಮೊದಲನೆಯ ಕಂತು) ಅನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಯಿತು.

ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು

L-6

ಕರ್ನಾಟಕ ಸರ್ಕಾರ

ಸಂಖ್ಯೆ: MWD 17 WLM 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 10-09-2020

ಇವರಿಂದ,
ಸರ್ಕಾರದ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.
ವಿಕಾಸ ಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯ ಪ್ರತಿಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಕವಿಸಸ/ಸಕಾಪ/87/ಅ.ಹ.ಔ/2019-20, ದಿನಾಂಕ: 09.09.2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ದಿನಾಂಕ: 23-09-2020ರಂದು ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಡಿಸಲು ದಿನಾಂಕವನ್ನು ನಿಗಧಿಪಡಿಸಲಾಗಿರುವ ಹಿನ್ನೆಲೆಯಲ್ಲಿ ಸದರಿ ವರದಿಯ 250 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,

10/9/2020

(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ

ಪ್ರತಿ ಮಾಹಿತಿಗಾಗಿ:
1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ ಬೆಂಗಳೂರು.

......

-5-

ಕರ್ನಾಟಕ ಸರ್ಕಾರ

ಸಂಖ್ಯೆ: MWD 17 WLM 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 10-09-2020

ಇವರಿಂದ,
ಸರ್ಕಾರದ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.
ವಿಕಾಸ ಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ;

ವಿಷಯ: ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯ ಪ್ರತಿಗಳನ್ನು ಒದಗಿಸುವ ಬಗ್ಗೆ.
ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಕಪಿಸಸ/ಸಕಾಪ/87/ಅ.ಹ.ಔ/2019-20, ದಿನಾಂಕ: 09.09.2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ದಿನಾಂಕ: 23-09-2020ರಂದು ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಡಿಸಲು ದಿನಾಂಕವನ್ನು ನಿಗದಿಪಡಿಸಲಾಗಿರುವ ಹಿನ್ನೆಲೆಯಲ್ಲಿ ಸದರಿ ವರದಿಯ 80 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,

(ಎಂ.ಸುಮಿತ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ

ಪ್ರತಿ ಮಾಹಿತಿಗಾಗಿ:
1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

11/9/20

11/09/2020

4

ಕೊಠಡಿ ಸಂಖ್ಯೆ 442–443
4ನೇ ಮಹಡಿ, ವಿಕಾಸಸೌಧ
ಬೆಂಗಳೂರು – 560 001
ದೂರವಾಣಿ ಸಂ. : 080–22257285
: 080–22035090

ಚವ್ಹಾಣ್
ಸಚಿವರು ಹಾಗೂ
ಯಾದಗಿರಿ ಜಿಲ್ಲಾ
ಉಸ್ತುವಾರಿ ಸಚಿವರು

ಸಂಖ್ಯೆ: ಪಸಅಕಹವಸ/653/2020 ದಿನಾಂಕ: 04.02.2020

ಇವರಿಗೆ,
ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿರವರು,
ಸನ್ಮಾನ್ಯ ಸಭಾಧ್ಯಕ್ಷರು,
ಕರ್ನಾಟಕ ವಿಧಾನ ಸಭೆ.

ಸನ್ಮಾನ್ಯರೇ,

ವಿಷಯ: ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯ ಶಿಫಾರಸ್ಸುಗಳನ್ನು ಮಂಡಿಸುವ ಬಗ್ಗೆ.

– – –

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಅಲ್ಪಸಂಖ್ಯಾತರ ಕಾಯಿದೆ 1994ರ ಕಲಂ 10(2)ರನ್ವಯ ವಿಧಾನ ಮಂಡಲದ ಉಭಯ ಸದನಗಳಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಆಯೋಗ ಸಲ್ಲಿಸಿರುವ ವರದಿಯ ಶಿಫಾರಸ್ಸುಗಳ ಮೇಲೆ ಕೈಗೊಂಡ ಕ್ರಮದ ವಿವರಗಳ ಮೆಮೊರಂಡಮ್‌ನ್ನು ಮಂಡಿಸಬೇಕಾಗಿದ್ದು, ಈ ಬಗ್ಗೆ ಈಗಾಗಲೇ ಸಚಿವ ಸಂಪುಟದಲ್ಲಿ ಅನುಮೋದನೆಯಾಗಿದ್ದು, ಸರ್ಕಾರದ ಆದೇಶ ಸಹ ಹೊರಡಿಸಲಾಗಿರುತ್ತದೆ ~~(ಪ್ರತಿ ಲಗತ್ತಿಸಿದೆ)~~ ಇದಕ್ಕೆ ಅನುಮತಿ ನೀಡಲು ವಿನಂತಿಸುತ್ತೇನೆ.

ಗೌರವಗಳೊಂದಿಗೆ,

ತಮ್ಮ ವಿಶ್ವಾಸಿ,

(ಪ್ರಭು ಬಿ. ಚವ್ಹಾಣ್)